ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: www.kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521
ಕಂಪನಿ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009

ಕವಿಪ್ರನಿನಿ/ಬಿ99/3677/2018-19 ದಿನಾಂಕ: 07 DEC 2021

ಲಗತ್ತು: 01 ಸುತ್ತೋಲೆ

## ಸುತ್ತೋಲೆ

**ವಿಷಯ:** ನಿಗಮದ ಸಿಬ್ಬಂದಿ ಸ್ಥಿರಾಸ್ತಿ/ಚರಾಸ್ತಿಯ ವ್ಯವಹರಣೆಯನ್ನು ವರದಿ ಮಾಡುವ ಬಗ್ಗೆ.

**ಉಲ್ಲೇಖ:**
1. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ34/40218/2013-14, ದಿನಾಂಕ:13.01.2014
2. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ99/3677/2019-2020 ದಿನಾಂಕ:07.06.2019
3. ಕರ್ನಾಟಕ ರಾಜ್ಯ ನಾಗರಿಕ ಸೇವಾ(ನಡತೆ) ನಿಯಮಗಳು, 2021 ರ ಅಧಿಸೂಚನೆ ಸಂಖ್ಯೆ: ಸಿಆಸುಇ 12 ಸೇನಿಸಿ 2019, ದಿನಾಂಕ:07.01.2021
4. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ84/24333/2021-22 ದಿನಾಂಕ:22.06.2021
5. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 65 ಸೇನಿಸಿ 2021; ದಿನಾಂಕ: 02.11.2021,

---

ಕರ್ನಾಟಕ ರಾಜ್ಯ ನಾಗರಿಕ ಸೇವಾ(ನಡತೆ) ನಿಯಮಗಳು, 2021 ರ ವಿಷಯದಲ್ಲಿ ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 12 ಸೇನಿಸಿ 2019, ದಿನಾಂಕ:07.01.2021 ನ್ನು ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ84/24333/2021-22 ದಿನಾಂಕ:22.06.2021 ರಲ್ಲಿ ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ. ಮುಂದುವರೆದು, ಸರ್ಕಾರಿ ನೌಕರರು ಸ್ಥಿರಾಸ್ತಿ/ಚರಾಸ್ತಿಗಳ ವ್ಯವಹರಣೆಗಳನ್ನು ನಿಯಮಿತ ಪ್ರಾಧಿಕಾರಗಳಿಗೆ ವರದಿ ಮಾಡುವಂತೆ, 2021 ರ ನಿಯಮಗಳ ನಿಯಮ 24(3) ಮತ್ತು 24(4)ರ ಅಂಶಗಳನ್ನು ಸ್ಪಷ್ಟೀಕರಿಸಿರುವ ಉಲ್ಲೇಖ 05 ರ ಸರ್ಕಾರದ ಸುತ್ತೋಲೆ ದಿನಾಂಕ: 02.11.2021ನ್ನು ಈ ಮೂಲಕ ಅಳವಡಿಸಿಕೊಳ್ಳಲಾಗಿದೆ.

ಸಿಬ್ಬಂದಿ ಸ್ಥಿರಾಸ್ತಿ/ಚರಾಸ್ತಿಗಳನ್ನು ಅರ್ಜಿಸಲು/ವಿಲೇ ಮಾಡಲು ನಿರಾಕ್ಷೇಪಣಾ ಪತ್ರವನ್ನು ಪಡೆಯುವ ವಿಷಯದಲ್ಲಿ ನಿಗಮವು ಹೊರಡಿಸಿರುವ ಆದೇಶ/ಸುತ್ತೋಲೆಗಳ ಬದಲಾಗಿ ಈ ಸುತ್ತೋಲೆಯ ಅಂಶಗಳನ್ನು ಅನುಸರಿಸತಕ್ಕದ್ದು ಹಾಗೂ ನಿರಾಕ್ಷೇಪಣಾ ಪತ್ರವನ್ನು ಕೋರಿ ಸಲ್ಲಿಸಿರುವ ಬಾಕಿಯಿರುವ ಅರ್ಜಿಗಳಲ್ಲಿ ಸಕ್ಷಮ ಪ್ರಾಧಿಕಾರಗಳು ಸರ್ಕಾರದ ಸುತ್ತೋಲೆ ದಿನಾಂಕ:02.11.2021 ಯಲ್ಲಿ ಸ್ಪಷ್ಟೀಕರಿಸಿರುವಂತೆ ಇತ್ಯರ್ಥಪಡಿಸುವುದು.

"ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ
ರವರಿಂದ ಅನುಮೋದಿಸಲ್ಪಟ್ಟಿದೆ."

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.)
ಕವಿಪ್ರನಿನಿ

**ಪ್ರತಿಗಳು**
1. ವ್ಯವಸ್ಥಾಪಕ ನಿರ್ದೇಶಕರು, ವಿಸಕಂಗಳು/ ಪಿಸಿಕೆಎಲ್
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ವಿಸಕಂಗಳು
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ ವಿಸಕಂಗಳು
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ ವಿಸಕಂಗಳು

6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/(ಪ್ರಸರಣ)/(ಆ. ಮತ್ತು ಮಾ.ಸಂ), ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು

<u>ಮಾಹಿತಿಗಾಗಿ ಹಾಗೂಸೂಕ್ತ ಕ್ರಮಕ್ಕಾಗಿ https://kptcl.karnataka.gov.in -->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>

1. ಎಲ್ಲಾ ಅಧೀಕ್ಷಕ ಇಂಜಿನಿಯರ್/ ನಿಯಂತ್ರಣಾಧಿಕಾರಿ, ಕವಿಪ್ರನಿನಿ/ ವಿಸಕಂಗಳು
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ವಿಸಕಂಗಳು
3. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ, ವಿಸಕಂಗಳು

<u>ಪ್ರತಿಗಳು ಮಾಹಿತಿಗಾಗಿ:</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ(ನೋ.ಸಂ.659)& ನಿರ್ದೇಶಕರು, ಕವಿಪ್ರನಿನಿ ಮತ್ತು ವಿಸಕಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ನಿರ್ದೇಶಕರು, ಕವಿಪ್ರನಿನಿ ಮತ್ತು ವಿಸಕಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಘ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಕೆ.ಆರ್.ವೃತ್ತ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ವಿಸಕಂಗಳು ಪ.ಜಾ./ ಪ.ಪಂ. ಅಧಿಕಾರಿಗಳ ಸಂಘ, ಬೆಂಗಳೂರು.

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಸಿಆಸುಇ/65/ಸೇನಿಸಿ/ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 02.11.2021

<u>ಸುತ್ತೋಲೆ</u>

ವಿಷಯ:ಸರ್ಕಾರಿ ನೌಕರರು ಸ್ಥಿರಾಸ್ತಿ/ ಚರಾಸ್ತಿಯ ವ್ಯವಹರಣೆಯನ್ನು ವರದಿ ಮಾಡುವ ಬಗ್ಗೆ.

*****

1. ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021 (ಸಂಕ್ಷಿಪ್ತವಾಗಿ '2021ರ ನಿಯಮಗಳು'), ದಿನಾಂಕ: 07-01-2021 ರಿಂದ ಜಾರಿಗೆ ಬಂದಿರುತ್ತದೆ.

2. 2021ರ ನಿಯಮಗಳ ನಿಯಮ 24(3) ರ ಅನುಸಾರ ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯನ್ನು ಹೊರತುಪಡಿಸಿ, ಬೇರೆ ಮೂಲಗಳಿಂದ ತನ್ನ ಹೆಸರಿನಲ್ಲಾಗಲಿ ಅಥವಾ ತನ್ನ ಕುಟುಂಬದ ಯಾವುದೇ ಸದಸ್ಯನ ಹೆಸರಿನಲ್ಲಾಗಲಿ ಗುತ್ತಿಗೆಯ, ಅಡಮಾನದ, ಖರೀದಿಯ, ಮಾರಾಟದ, ಉಡುಗೊರೆಯ ಮೂಲಕ ಅಥವಾ ಅನ್ಯಥಾ ಸ್ಥಿರ ಸ್ವತ್ತನ್ನು ಅರ್ಜಿಸುವ ಅಥವಾ ವಿಲೇ ಮಾಡುವ ಬಗ್ಗೆ, ನಿಯಮಿಸಲಾದ ಪ್ರಾಧಿಕಾರಕ್ಕೆ ಮೊದಲೇ ತಿಳಿಸಬೇಕಾಗುತ್ತದೆ. ಒಂದು ವೇಳೆ ಸಮರ್ಥನೀಯ ಕಾರಣಗಳಿಂದಾಗಿ ನಿಯಮಿತ ಪ್ರಾಧಿಕಾರಿಗೆ ಮೊದಲೇ ತಿಳಿಸದೇ ಯಾವುದೇ ಸ್ಥಿರ ಸ್ವತ್ತನ್ನು ಅರ್ಜಿಸಿದ್ದಲ್ಲಿ, ಅಥವಾ ವಿಲೇ ಮಾಡಿದ್ದಲ್ಲಿ, ಅಂತಹ ವ್ಯವಹಾರ ಕೈಗೊಂಡ ಎರಡು ತಿಂಗಳೊಳಗಾಗಿ ವಿವರಗಳು ಹಾಗೂ ಪೂರಕ ದಾಖಲೆಗಳು ಮತ್ತು ಸಮರ್ಥನೀಯ ಕಾರಣಗಳೊಂದಿಗೆ ನಿಯಮಿತ ಪ್ರಾಧಿಕಾರಿಗೆ ವರದಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಹಾಗೆ ಸರ್ಕಾರಿ ನೌಕರನು ನೀಡಿದ ಕಾರಣಗಳು ಅಂಗೀಕಾರಾರ್ಹವೆಂದು ತೃಪ್ತಿಪಟ್ಟಲ್ಲಿ, ಸರ್ಕಾರಿ ನೌಕರನು ಸಲ್ಲಿಸಿದ ದಾಖಲೆಗಳು ಹಾಗೂ ವಿವರಗಳನ್ನು ಪರಿಶೀಲಿಸಿ ಅಂತಹ ವ್ಯವಹರಣೆಯನ್ನು ಘಟನೋತ್ತರವಾಗಿ ನಿಯಮಿತ ಪ್ರಾಧಿಕಾರವು ಟಿಪ್ಪಣಿ ಮಾಡಿಕೊಳ್ಳಬಹುದಾಗಿದೆ. ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯೊಂದಿಗಿನ ವ್ಯವಹಾರವಾದರೆ ಮಾತ್ರ ಸರ್ಕಾರಿ ನೌಕರನಿಗೆ ನಿಯಮಿಸಲಾದ ಪ್ರಾಧಿಕಾರಿಯ ಪೂರ್ವ ಮಂಜೂರಾತಿ ಅಗತ್ಯವಿರುತ್ತದೆ.

3. 2021ರ ನಿಯಮಗಳ ,ನಿಯಮ 24(4)ರ ಅನುಸಾರ ಸರ್ಕಾರಿ ನೌಕರನು ತನ್ನ ಸ್ವಂತ ಹೆಸರಿನಲ್ಲಾಗಲೀ ಅಥವಾ ತನ್ನ ಕುಟುಂಬದ ಯಾರೇ ಸದಸ್ಯರ ಹೆಸರಿನಲ್ಲಾಗಲೀ ತಾನು ಅಥವಾ ತನ್ನ ಕುಟುಂಬದ ಯಾರೇ ಸದಸ್ಯರು ಒಡೆತನ ಹೊಂದಿರುವ ಅಥವಾ ಧಾರಣ ಮಾಡಿರುವ ಚರಾಸ್ತಿಯ ಸಂಬಂಧದಲ್ಲಿ ಮಾಡುವ ಪ್ರತಿಯೊಂದು ವ್ಯವಹಾರವನ್ನು ಅಂತಹ ಸ್ವತ್ತಿನ ಮೌಲ್ಯವು ಆತನ ಮಾಸಿಕ ಮೂಲವೇತನ ಮೀರಿದರೆ ನಿಯಮಿಸಿದ ಪ್ರಾಧಿಕಾರಕ್ಕೆ ವರದಿ ಮಾಡತಕ್ಕದ್ದು. ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯೊಂದಿಗಿನ ವ್ಯವಹಾರವಾದರೆ ಮಾತ್ರ ನಿಯಮಿಸಲಾದ ಪ್ರಾಧಿಕಾರದ ಪೂರ್ವ ಮಂಜೂರಾತಿಯ ಅಗತ್ಯವಿರುತ್ತದೆ.

4. 2021ರ ನಿಯಮಗಳ ನಿಯಮ 24(3) ಮತ್ತು 24(4)ರ ಹಿನ್ನೆಲೆಯಲ್ಲಿ ಮೇಲಿನ ಕಂಡಿಕೆಗಳಲ್ಲಿ ಸ್ಪಷ್ಟಪಡಿಸಿರುವಂತೆ ಅಗತ್ಯವಿರುವ ಪ್ರಕರಣಗಳಲ್ಲಿ ಮಾತ್ರ ಪೂರ್ವ ಮಂಜೂರಾತಿ ನೀಡಲು ನಿಯಮಿಸಿದ ಪ್ರಾಧಿಕಾರಗಳು ಕ್ರಮ ವಹಿಸಬೇಕೆಂದು ಸೂಚಿಸಿದೆ. ಈ ಸುತ್ತೋಲೆಯ ಅಂಶಗಳನ್ನು, ಎಲ್ಲಾ ನಿಯಮಿಸಿದ ಪ್ರಾಧಿಕಾರಗಳು ಹಾಗೂ ಸರ್ಕಾರಿ ನೌಕರರ ಗಮನಕ್ಕೆ ತರುವಂತೆ ಸರ್ಕಾರದ ಎಲ್ಲಾ ಅಪರ ಮುಖ್ಯ/ಪ್ರಧಾನ/ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳಿಗೆ ತಿಳಿಸಿದೆ.

(ನಾಗರತ್ನ ಪಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-

ಸಂಕಲನಕಾರರು, ಕರ್ನಾಟಕ ಇ ರಾಜ್ಯ ಪತ್ರ.

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
18. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗೆ)